ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	888
ಮಾನ್ಯ ಸದಸ್ಯರ ಹೆಸರು	ಶ್ರೀ ಆರ್.ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	28.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಗಳ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ 9 ಬಾಲಕ ಹಾಗೂ 8 ಬಾಲಕಿಯರ ಹೀಗೆ ಒಟ್ಟು 17 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ತಾಲ್ಲೂಕುವಾರು ವಿವರಗಳು ಕೆಳಕಂಡಂತಿವೆ.
<table>
<tr><th>ತಾಲ್ಲೂಕಿನ ಹೆಸರು</th><th>ಬಾಲಕ</th><th>ಬಾಲಕಿ</th><th>ಒಟ್ಟು</th></tr>
<tr><td>ಹೊನ್ನಾಳಿ</td><td>5</td><td>3</td><td>8</td></tr>
<tr><td>ಚನ್ನಗಿರಿ</td><td>4</td><td>5</td><td>9</td></tr>
<tr><td>ಒಟ್ಟು</td><td>9</td><td>8</td><td>17</td></tr>
</table></td></tr>
<tr><td>ಆ)</td><td>ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಗಳ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ನಂತರ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ 3 ಬಾಲಕ ಹಾಗೂ 5 ಬಾಲಕಿಯರ ಹೀಗೆ ಒಟ್ಟು 8 ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ತಾಲ್ಲೂಕುವಾರು ವಿವರಗಳು ಕೆಳಕಂಡಂತಿವೆ.
<table>
<tr><th>ತಾಲ್ಲೂಕಿನ ಹೆಸರು</th><th>ಬಾಲಕ</th><th>ಬಾಲಕಿ</th><th>ಒಟ್ಟು</th></tr>
<tr><td>ಹೊನ್ನಾಳಿ</td><td>1</td><td>2</td><td>3</td></tr>
<tr><td>ಚನ್ನಗಿರಿ</td><td>2</td><td>3</td><td>5</td></tr>
<tr><td>ಒಟ್ಟು</td><td>3</td><td>5</td><td>8</td></tr>
</table></td></tr>
<tr><td>ಇ)</td><td>ಈಗಿರುವ ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರುಗಳು ಹೆಚ್ಚಾಗಿರುವುದರಿಂದ ಹೊಸ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ನಿಗಧಿಪಡಿಸಿರುವ ಮಂಜೂರಾತಿ ಸಂಖ್ಯೆಗನುಗುಣವಾಗಿ ಪ್ರವೇಶ ನಿಯಮಗಳನುಸಾರ ಪ್ರವರ್ಗವಾರು ಅರ್ಹ ವಿದ್ಯಾರ್ಥಿಗಳಿಗೆ ದಾಖಲಾತಿಯನ್ನು ಕಲ್ಪಿಸಲಾಗುತ್ತಿದೆ.

ಮುಂದುವರೆದು, ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ, ಪ್ರವೇಶ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪರ್ಯಾಯವಾಗಿ ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನದ ಲಭ್ಯತೆಯನುಸಾರ 10 ತಿಂಗಳ ಅವಧಿಗೆ ಪ್ರತಿ ವಿದ್ಯಾರ್ಥಿಗೆ ರೂ.15,000/-ಗಳನ್ನು ಮಂಜೂರು ಮಾಡಲಾಗುತ್ತಿದೆ.

ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಆಯಾ ಆರ್ಥಿಕ ವರ್ಷದ ಅನುದಾನ ಲಭ್ಯತೆಯನ್ನು ಆಧರಿಸಿರುತ್ತದೆ.</td></tr>
</table>

ಸಂಖ್ಯೆ:ಹಿಂವಕ 557 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ